# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 676 (736) |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 13/07/2023 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಸಂಘಟಿತ ವಲಯಗಳಲ್ಲಿ ದುಡಿಯುತ್ತಿರುವ ಒಟ್ಟು ಕಾರ್ಮಿಕರ ಸಂಖ್ಯೆ ಎಷ್ಟು; ವಿವಿಧ ವಲಯಗಳ ಪ್ರತ್ಯೇಕ ಪಟ್ಟಿ ನೀಡುವುದು; | ಅಸಂಘಟಿತ ಕಾರ್ಮಿಕರ ಸಂಖ್ಯೆಗೆ ಸಂಬಂಧಿಸಿದಂತೆ ಈವರೆಗೆ ಕಾರ್ಮಿಕ ಇಲಾಖೆಯಿಂದ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ. ಆದ್ದರಿಂದ, ಅಸಂಘಟಿತ ಕಾರ್ಮಿಕರ ನಿಖರ ಸಂಖ್ಯೆ ಲಭ್ಯವಿರುವುದಿಲ್ಲ. ಆದರೆ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳು/ ಕೋವಿಡ್-19ರ ವಿಶೇಷ ಪ್ಯಾಕೇಜ್‌ನಡಿ ಹಾಗೂ ಅಸಂಘಟಿತ ಕಾರ್ಮಿಕರ ದತ್ತಾಂಶ ಸಂಗ್ರಹಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಇ-ಶ್ರಮ್ ಪೋರ್ಟಲ್‌ನಲ್ಲಿ ನೋಂದಾಯಿಸುವ ಕಾರ್ಯಕ್ರಮ ಕೈಗೊಂಡಿದ್ದು, ಸದರಿ ಪೋರ್ಟಲ್‌ನಲ್ಲಿ ನೋಂದಾಯಿತರಾದ ಅಸಂಘಟಿತ ಕಾರ್ಮಿಕರ ಸಂಖ್ಯೆಯು ಲಭ್ಯವಿದ್ದು, ವಿವರ ಈ ಕೆಳಕಂಡಂತಿದೆ. |

| ಯೋಜನೆಗಳು/ಕಾರ್ಯಕ್ರಮ | ನೋಂದಾಯಿತ ಕಾರ್ಮಿಕರ ಸಂಖ್ಯೆ | ಷರಾ |
|---|---|---|
| ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ | 8,40,561 (ಸಾರಿಗೆ ಇಲಾಖೆಯ ದತ್ತಾಂಶದ ಪ್ರಕಾರ) | ವರ್ಗವಾರು ಪಟ್ಟಿಯನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ. |
| ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ನೋಂದಣಿ(11 ವರ್ಗಗಳಾದ ಹಮಾಲರು, ಗೃಹಕಾರ್ಮಿಕರು, ಚಿಂದಿ ಆಯುವವರು, ಟೈಲರ್‌ಗಳು, ಮೆಕ್ಯಾನಿಕ್ಸ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕರು) | 2,88,110 | |
| ಕೋವಿಡ್-19ರ ವಿಶೇಷ ಪ್ಯಾಕೇಜ್‌ನಡಿ ನೊಂದಾಯಿತರಾದ 11 ವರ್ಗಗಳ ಕಾರ್ಮಿಕರ ಸಂಖ್ಯೆ | 14,52,943 | |
| ಇ-ಶ್ರಮ್ ಕಾರ್ಯಕ್ರಮದಡಿ ನೋಂದಣಿಯಾದ ಅಸಂಘಟಿತ ಕಾರ್ಮಿಕರು:- (04-07-2023ರ ಅಂತ್ಯಕ್ಕೆ) | 76,13,015 | ವಲಯವಾರು ಪಟ್ಟಿಯನ್ನು ಅನುಬಂಧ-2 ರಲ್ಲಿ ಲಗತ್ತಿಸಿದ |
| ಒಟ್ಟು | 97,30,573 | |

| | | |
|---|---|---|
| ಆ) | ಸದರಿ ಅಸಂಘಟಿತ ವಲಯಗಳಲ್ಲಿ ದುಡಿಯುತ್ತಿರುವ ಕಾರ್ಮಿಕರಿಗೆ ಸರ್ಕಾರದಿಂದ ದೊರೆಯುತ್ತಿರುವ ಸೌಲಭ್ಯಗಳು ಯಾವುವು; | ಕೆಲವು ಅಸಂಘಟಿತ ವರ್ಗದ ಕಾರ್ಮಿಕರಿಗೆ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ಸಾಮಾಜಿಕ ಭದ್ರತಾ ಯೋಜನೆಗಳಡಿ ನೀಡುತ್ತಿರುವ ಸೌಲಭ್ಯಗಳು ಈ ಕೆಳಕಂಡಂತಿದೆ.<br><br>**(1) ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-** ಈ ಯೋಜನೆಯಡಿ ಖಾಸಗಿ ವಾಣಿಜ್ಯ ಸಾರಿಗೆ ವಾಹನಗಳ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br><br>**(ಅ) ಅಪಘಾತ ಪರಿಹಾರ:**<br>ಅಪಘಾತದಿಂದ ಮೃತರಾದ ಪ್ರಕರಣಗಳಲ್ಲಿ ಅವರ ನಾಮನಿರ್ದೇಶಿತರಿಗೆ ರೂ. 5 ಲಕ್ಷ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಪ್ರಕರಣಗಳಲ್ಲಿ ರೂ.2 ಲಕ್ಷಗಳವರೆಗೆ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದ ವರೆಗೆ ಚಿಕಿತ್ಸಾ ವೆಚ್ಚ ಮರುಪಾವತಿ ಮಾಡಲಾಗುತ್ತಿದೆ.<br><br>**(ಆ) ಶೈಕ್ಷಣಿಕ ಧನ ಸಹಾಯ:**<br>ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಒಂದನೇ ತರಗತಿಯಿಂದ ಪದವಿಪೂರ್ವ ತರಗತಿಯ ವರೆಗೆ ವ್ಯಾಸಂಗ ಮಾಡಲು ವಾರ್ಷಿಕ ತಲಾ ರೂ.10,000/-ರಂತೆ ಶೈಕ್ಷಣಿಕ ಸಹಾಯ ಧನ ವಿತರಿಸಲಾಗುತ್ತಿದೆ.<br><br>**(2) ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-**<br>ಪ್ರಸ್ತುತ, 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು "ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ"ಯಡಿ ಕಾರ್ಮಿಕರನ್ನು ನೋಂದಾಯಿಸಿ ಗುರುತಿನ ಚೀಟಿ ವಿತರಿಸಲಾಗಿದೆ. ಸದರಿ ಯೋಜನೆಯಡಿ ಯಾವುದೇ ಆರ್ಥಿಕ ಸೌಲಭ್ಯ ನೀಡಲಾಗುತ್ತಿಲ್ಲ. |
| ಇ) | ಕಳೆದ ವರ್ಷ ಎಷ್ಟು ಜನ ಅಸಂಘಟಿತ ವಲಯಗಳಲ್ಲಿ ದುಡಿಯುತ್ತಿರುವ ಕಾರ್ಮಿಕರು ಸದರಿ ಸೌಲಭ್ಯಗಳನ್ನು ಪಡೆದಿದ್ದಾರೆ; | ಮಂಡಳಿಯು ಜಾರಿಗೊಳಿಸುತ್ತಿರುವಸಾಮಾಜಿಕ ಭದ್ರತಾ ಯೋಜನೆಗಳಡಿ ಕಳೆದ ವರ್ಷದಲ್ಲಿ ಸೌಲಭ್ಯಗಳನ್ನು ವಿತರಿಸಿದ ವಿವರ ಈ ಕೆಳಕಂಡಂತಿದೆ:-<br><br>**(1) ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-** |

**(ಅ) ಅಪಘಾತ ಪರಿಹಾರ ಹಾಗೂ ಶೈಕ್ಷಣಿಕ ಧನ ಸಹಾಯ**

| ಅಪಘಾತ ಪರಿಹಾರ | | ಶೈಕ್ಷಣಿಕ ಧನ ಸಹಾಯ | |
|---|---|---|---|
| ಯೋಜನಾ ಸೌಲಭ್ಯ ಪಡೆದ ಕಾರ್ಮಿಕರು | ಪರಿಹಾರದ ಮೊತ್ತ (ರೂ. ಗಳಲ್ಲಿ) | ವಿದ್ಯಾರ್ಥಿಗಳ ಸಂಖ್ಯೆ | ಮೊತ್ತ (ರೂ. ಗಳಲ್ಲಿ) |
| 185 | 8,86,98,498/- | 257 | 25,70,000/- |
| | | | |

**(2) ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-**

ಈ ಯೋಜನೆಯಡಿ ಕಳೆದ ಸಾಲಿನಲ್ಲಿ ಒಟ್ಟು 35,296 11 ವರ್ಗಗಳ ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಿ ಗುರುತಿನ ಚೀಟಿ ವಿತರಿಸಲಾಗಿದೆ ಹಾಗು ಯಾವುದೇ ಆರ್ಥಿಕ ಸೌಲಭ್ಯ ನೀಡಲಾಗುತ್ತಿಲ್ಲ.

ಈ) ಅಸಂಘಟಿತ ವಲಯದಲ್ಲಿ ದುಡಿಯುತ್ತಿರುವ ಕಾರ್ಮಿಕರ ಜೀವನ ಮಟ್ಟ ಸುಧಾರಿಸಲು ಹಾಗೂ ಅವರುಗಳ ಆರ್ಥಿಕ ಸಬಲೀಕರಣಕ್ಕಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮ ಹಾಗೂ ಯೋಜನೆಗಳೇನು; ಹಾಗೂ ವಿನಿಯೋಗಿಸುತ್ತಿರುವ ಅನುದಾನದ ವಿವರಗಳೇನು;

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು, ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ಜಾರಿಗೊಳಿಸುತ್ತಿರುವ ಯೋಜನೆಗಳ ವಿವರವನ್ನು **ಪ್ರಶ್ನೆ (ಅ)ದಲ್ಲಿ** ಉತ್ತರ ನೀಡಲಾಗಿದೆ. ಸದರಿ ಯೋಜನೆಗಳಡಿ ಹಾಗೂ ಕೋವಿಡ್-19ರ ವಿಶೇಷ ಪ್ಯಾಕೇಜ್‌ಗಳಡಿ ಕಳೆದ ಮೂರು ವರ್ಷಗಳಲ್ಲಿ ವಿನಿಯೋಗಿಸಿರುವ ಅನುದಾನದ ವಿವರ ಈ ಕೆಳಗಿನಂತಿದೆ.

**(1) ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-**

| ವರ್ಷ | ವೆಚ್ಚ (ಲಕ್ಷಗಳಲ್ಲಿ) |
|---|---|
| 2020-21 | 1001.35 |
| 2021-22 | 1087.04 |
| 2022-23 | 869.78 |

**2) ಕೋವಿಡ್-19ರ ವಿಶೇಷ ಪ್ಯಾಕೇಜ್:**

| ವರ್ಷ | ವೆಚ್ಚ (ಲಕ್ಷಗಳಲ್ಲಿ) |
|---|---|
| 2020-21 | 6339.00 |
| 2021-22 | 24657.00 |

**ಕಾಇ 300 ಎಲ್ ಇಟಿ 2023**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**

## ಅನುಬಂಧ-1

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 736**

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಮಾಜಿಕ ಭದ್ರತಾ ಮಂಡಳಿಯಲ್ಲಿ ವಿವಿಧ ಯೋಜನೆಗಳಡಿ ಅಸಂಘಟಿತ ಕಾರ್ಮಿಕರ ವರ್ಗವಾರು ಪಟ್ಟಿ ಈ ಕೆಳಗಿನಂತಿದೆ.

| ಕ್ರ.ಸಂ | ವರ್ಗಗಳು | ನರ್ಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ | ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ | ಕೋವಿಡ್-19ರ ವಿಶೇಷ ಪ್ಯಾಕೇಜ್ |
|---|---|---|---|---|
| 1 | ಕ್ಷೌರಿಕರು | - | 13505 | 8678 |
| 2 | ಗೃಹ ಕಾರ್ಮಿಕರು | - | 61910 | 436424 |
| 3 | ಅಕ್ಕಸಾಲಿಗರು | - | 6313 | 8792 |
| 4 | ಹಮಾಲರು | - | 40527 | 95653 |
| 5 | ಕಮ್ಮಾರರು | - | 1019 | 13953 |
| 6 | ಮಂಡಕ್ಕಿ ಭಟ್ಟಿ ಕಾರ್ಮಿಕರು | - | 1860 | 12382 |
| 7 | ಮೆಂಕ್ಯಾನಿಕ್ | - | 15514 | 48362 |
| 8 | ಕುಂಬಾರರು | - | 2180 | 22417 |
| 9 | ಚಿಂದಿ ಆಯಯುವವರು | - | 5571 | 9094 |
| 10 | ಟೈಲರ್ಸ್ | - | 133496 | 777694 |
| 11 | ಅಗಸರು | - | 6215 | 19494 |
| 12 | ಚಾಲಕರು | 8,40,561 | - | - |
| | ಒಟ್ಟು | **8,40,561** | **288110** | **14,52,943** |

# ಅನುಬಂಧ-2

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ (ವಿಧಾನಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 736

04-07-2023ರ ಅಂತ್ಯಕ್ಕೆ ಇ-ಶ್ರಮ್ ಕಾರ್ಯಕ್ರಮದಡಿ ನೋಂದಣಿಯಾದ ಅಸಂಘಟಿತ ಕಾರ್ಮಿಕರ ಸಂಖ್ಯೆ ಈ ಕೆಳಗಿನಂತಿದೆ.

| Sl. No | Occupation Sector | No of Registrations |
|---|---|---|
| 1 | Agriculture | 4164948 |
| 2 | Construction | 890112 |
| 3 | Apparel | 698963 |
| 4 | Automobile & Transportation | 346547 |
| 5 | Miscellaneous | 328121 |
| 6 | Domestic and Household Workers | 197976 |
| 7 | Leather Industry Works | 128456 |
| 8 | Capital Goods & Manufacturing | 110993 |
| 9 | Healthcare | 104380 |
| 10 | Tobacco Industry | 95953 |
| 11 | Office Administration & Facility Management | 94797 |
| 12 | Tourism & Hospitality | 82097 |
| 13 | Electronics & HW | 78904 |
| 14 | Handicrafts & Carpets | 51871 |
| 15 | Education | 41048 |
| 16 | Retail | 40699 |
| 17 | Beauty & Wellness | 36238 |
| 18 | Food Industry | 25189 |
| 19 | Professionals | 24627 |
| 20 | Gem & Jewellery | 17710 |
| 21 | Printing | 17314 |
| 22 | Private Security | 9711 |
| 23 | Service | 8043 |
| 24 | Wood & Carpentry | 4275 |
| 25 | Mining | 3560 |
| 26 | Textile & Handloom | 3185 |
| 27 | Musical Instruments | 2221 |
| 28 | Organised Retail | 1841 |
| 29 | Others | 1421 |
| 30 | BFSI | 1077 |
| 31 | Glass & Ceramics | 729 |
| 32 | Carpenters and Joiners | 8 |
| 33 | Tool Makers and Related Workers | 1 |
| **Total** | | **7613015** |